**FEBRUARY 5, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

## ಮುಖ್ಯಾಂಶಗಳು

- **ಮನ್ರೇಗಾ ಮರು** ಸ್ಥಾಪನೆಗೆ ಆಗ್ರಹಿಸಿ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಅವರು ಮಂಡಿಸಿದ ನಿರ್ಣಯಕ್ಕೆ ಬಹುತೇಕ ಕಾಂಗ್ರೆಸ್ ಶಾಸಕರ ಬೆಂಬಲ.

- **ಕನ್ನಡ ಮಾಧ್ಯಮ ಅಭ್ಯರ್ಥಿಗಳ** ಮೀಸಲು ಶೇಕಡಾ 10ಕ್ಕೆ ಏರಿಸಲು ಶಿಫಾರಸು : ಡಾ. ಪುರು ೋತ್ತಮ ಬಿಳಿಮಲೆ ಮಾಹಿತಿ.

- **ಕರ್ನಾಟಕ ಗಡಿ ಅಭಿವೃದ್ಧಿ** ಪ್ರಾಧಿಕಾರದ 'ಗಡಿನಾಡು ಚೇತನ' ಪ್ರಶಸ್ತಿಗೆ ವಿಜಯಪುರ ಜಿಲ್ಲೆ ತಾಂಬಾ ಗ್ರಾಮದ ಅನುವಾದಕ ನಾಗೇಶ್ ಕುಲಕರ್ಣಿ ಭಾಜನ.

- **ಬೆಂಗಳೂರು ದಕ್ಷಿಣ ಜಿಲ್ಲೆಯ** ರಾಮನಗರದ ಜಾನಪದ ಲೋಕದಲ್ಲಿ ಇದೇ 7 ಮತ್ತು 8 ರಂದು 'ವಿದ್ಯಾರ್ಥಿ ಜಾನಪದ ಲೋಕೋತ್ಸವ–2026'

## ಈಗ ವಾರ್ತೆಗಳ ವಿವರ

*******

**ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ** ಉದ್ಯೋಗ ಖಾತ್ರಿ ಕಾಯ್ದೆಯನ್ನು ಅದರ ಮೂಲ ಸ್ವರೂಪದಲ್ಲಿಯೇ ಮರುಸ್ಥಾಪಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸಭೆಯಲ್ಲಿ ಮಂಡಿಸಿದ ನಿರ್ಣಯಕ್ಕೆ ಬಹುತೇಕ ಕಾಂಗ್ರೆಸ್ ಸದಸ್ಯರು ಬೆಂಬಲ ಸೂಚಿಸಿದರು. ಒಕ್ಕೂಟ ಮತ್ತು ವಿಕೇಂದ್ರಿಕರಣ ತತ್ವಕ್ಕೆ ವಿರೋಧವಾಗಿರುವ, ಗ್ರಾಮ ಪಂಚಾಯಿತಿಗಳ ಅಧಿಕಾರ ಮತ್ತು ಹಕ್ಕುಗಳನ್ನು ಕಸಿದುಕೊಂಡಿರುವ ವಿಬಿ ಜಿ ರಾಮ್‌ಜಿ ಕಾಯ್ದೆಯನ್ನು ಕೇಂದ್ರ ಸರ್ಕಾರವು ತಕ್ಷಣವೇ ರದ್ದುಗೊಳಿಸಬೇಕು ಎನ್ನುವ ನಿರ್ಣಯವನ್ನು ಮುಖ್ಯಮಂತ್ರಿ ಸದನದಲ್ಲಿ ಮಂಡಸಿದರು. ನಿರ್ಣಯ ಬೆಂಬಲಿಸಿ ಶಾಸಕರಾದ ಎನ್.ಎಚ್.ಕೋನರೆಡ್ಡಿ, ಶರತ್ ಬಚ್ಚೇಗೌಡ, ಸಿ.ಎಂ. ಶಿವಲಿಂಗೇಗೌಡ, ಎಸ್.ಎನ್.ನಾರಾಯಣಸ್ವಾಮಿ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಸೇರಿದಂತೆ

ಹಲವು ಶಾಸಕರು ನಿರ್ಣಯ ಬೆಂಬಲಿಸಿ, ಕೇಂದ್ರ ಸರ್ಕಾರದ ನಡೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿ–ಜಿರಾಮ್–ಜಿ– ಕಾಯ್ದೆ ದೇಶದ 11 ಕೋಟಿ ಕಾರ್ಮಿಕರಿಗೆ ವಿರುದ್ಧವಾಗಿದೆ. ಈ ಕಾಯ್ದೆಯು ಕೇವಲ ಗುತ್ತಿಗೆದಾರರು ಮತ್ತು ಕಾರ್ಪೋರೇಟ್ ಕಂಪೆನಿಗಳಿಗೆ ಲಾಭ ಮಾಡಿಕೊಡುವ ಯೋಜನೆಯಾಗಿ ಮಾರ್ಪಟ್ಟಿದೆ. ರೈತಾಪಿ ಜನರ ಹಕ್ಕುಗಳನ್ನು ಕಸಿದುಕೊಳ್ಳಲಾಗಿದೆ. ಗ್ರಾಮೀಣ ಭಾಗದ ಕೂಲಿ ಕಾರ್ಮಿಕರನ್ನು ಆಧುನಿಕ ಗುಲಾಮಗಿರಿಗೆ ತಳ್ಳುವ ಪ್ರಯತ್ನ ಮಾಡಿದೆ. ಕೂಡಲೇ ಕಾಯ್ದೆ ಹಿಂಪಡೆಯಬೇಕು ಎಂದು ಶಾಸಕರು ಆಗ್ರಹಿಸಿದರು.

*******

**ರಾಜ್ಯ ಸರ್ಕಾರಿ ನೇಮಕಾತಿಗಳಲ್ಲಿ** ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಈಗಿರುವ ಶೇಕಡಾ 5 ರ ಷ್ಟು ಮೀಸಲಾತಿಯನ್ನು ಶೇಕಡಾ 10 ಕ್ಕೆ ಹೆಚ್ಚಿಸಲು ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರು ಷೋತ್ತಮ ಬಿಳಿಮಲೆ ಹೇಳಿದ್ದಾರೆ. ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ಹಾಗೂ ಖಾಸಗಿ ವಲಯಗಳಲ್ಲಿ ಕನ್ನಡಿಗರ ಪ್ರಾತಿನಿಧ್ಯ ಕಡಿಮೆಯಾಗುತ್ತಿದೆ. ಎಸ್‌ಎಸ್‌ಎಲ್‌ಸಿ ವರೆಗೆ ಕನ್ನಡ ಮಾಧ್ಯಮದಲ್ಲಿ ಓದಿದವರಿಗೆ ಮೀಸಲಾತಿ ಹೆಚ್ಚಿಸಿದರೆ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ ಎಂದರು. ಹೊರಗುತ್ತಿಗೆ ನೇಮಕಾತಿಗಳಲ್ಲಿಯೂ ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಆದ್ಯತೆ ನೀಡುವಂತೆ ಸರ್ಕಾರಕ್ಕೆ ಶಿಫಾರಸು ಮಾಡಲಾಗುವುದು. ಖಾಸಗಿ ವಲಯಗಳಲ್ಲಿ ಸರೋಜಿನಿ ಮಹಿಷಿ ವರದಿ ಅನು ಷ್ಠಾನ ಸ್ಥಿತಿಯನ್ನು ಪ್ರಾಧಿಕಾರ ಪರಿಶೀಲಿಸಲಿದೆ ಎಂದು ಪುರುಷೋತ್ತಮ ಬಿಳಿಮಲೆ ಹೇಳಿದರು.

*******

**'ಬೆಂಗಳೂರು ಪುಣೆ' ನಡುವೆ** ಮತ್ತೊಂದು ಹೈ ಸ್ಪೀಡ್ ರೈಲು ಕಾರಿಡಾರ್‌ಗೆ ಚಿಂತನೆ ನಡೆದಿದ್ದು, ಕೇಂದ್ರ ರೈಲ್ವೆ ಸಚಿವರು ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಬೆಂಗಳೂರು ಮತ್ತು ಪುಣೆ ನಡುವೆ ಹೈ ಸ್ಪೀಡ್ ರೈಲು ಕಾರಿಡಾರ್ ನಿರ್ಮಾಣಕ್ಕಾಗಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈ ಷ್ಣವ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದರು. ಈ ರೈಲು ಕಾರಿಡಾರ್ ನಿರ್ಮಾಣದಿಂದ ಮಧ್ಯ ಕರ್ನಾಟಕ ಮತ್ತು ಉತ್ತರ ಕರ್ನಾಟಕಕ್ಕೆ ಹೆಚ್ಚಿನ ಪ್ರಯೋಜನ ಆಗಲಿದ್ದು, ರಾಜ್ಯದ ಬೆಳಗಾವಿ, ಹುಬ್ಬಳ್ಳಿ, ಹಾವೇರಿ, ದಾವಣಗೆರೆ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರ

*******

**ಕರ್ನಾಟಕ ಗಡಿ ಅಭಿವೃದ್ಧಿ** ಪ್ರಾಧಿಕಾರ ಕೊಡಮಾಡುವ 'ಗಡಿನಾಡು ಚೇತನ' ಪ್ರಶಸ್ತಿಗೆ ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ತಾಂಬಾ ಗ್ರಾಮದ ನಿವೃತ್ತ ಶಿಕ್ಷಕ, ಸಾಹಿತಿ ಹಾಗೂ ಭಾ ಷಾಂತರಕಾರ ನಾಗೇಶ್ ಕುಲಕರ್ಣಿ ಭಾಜನರಾಗಿದ್ದಾರೆ. ಪ್ರಶಸ್ತಿಗೆ ಆಯ್ಕೆಯಾಗಿರುವ ಕುರಿತು ನಾಗೇಶ ಕುಲಕರ್ಣಿ ಅವರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ–ನಾಗೇಶ ಕುಲಕರ್ಣಿ–21 ಸೆಕೆಂಡ್ಸ್**

*******

**ಕೇಂದ್ರ ಬೃಹತ್ ಮತ್ತು ಮಧ್ಯಮ** ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ದೆಹಲಿಯಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿ, ಮಾನವ–ವನ್ಯಜೀವಿ ಸಂಘರ್ಷ ತಡೆಗೆ ಸಂಬಂಧಪಟ್ಟಂತೆ, ಚರ್ಚೆ ನಡೆಸಿದರು. ಕರ್ನಾಟಕದಲ್ಲಿ ಕೊಡಗು, ಚಿಕ್ಕಮಗಳೂರು, ಹಾಸನ, ಮೈಸೂರು, ಚಾಮರಾಜನಗರ, ಶಿವಮೊಗ್ಗ, ರಾಮನಗರ ಸೇರಿದಂತೆ, ವಿವಿಧ ಜಿಲ್ಲೆಗಳಲ್ಲಿನ ಆನೆ ದಾಳಿಯ ಬಗ್ಗೆ ಭೂಪೇಂದ್ರ ಯಾದವ್ ಅವರ ಗಮನ ಸೆಳೆದ ಸಚಿವರು, ಆನೆ ದಾಳಿಯಿಂದ ಅನೇಕ ರೈತರು ಜೀವ ಕಳೆದುಕೊಂಡಿದ್ದಾರೆ. ರೈತರಿಗೆ ಬೆಳೆ ನಷ್ಟವಾಗಿದೆ. ದಿನೇ ದಿನೇ ಸಮಸ್ಯೆ ಹೆಚ್ಚಾಗುತ್ತಿದೆ. ಶಾಶ್ವತ ಪರಿಹಾರದ ಅಗತ್ಯವಿದೆ ಎಂದು ಮನವರಿಕೆ ಮಾಡಿಕೊಟ್ಟರು.

***********

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

***********

**ಬೆಂಗಳೂರು ದಕ್ಷಿಣ ಜಿಲ್ಲೆಯ** ರಾಮನಗರದ ಜಾನಪದ ಲೋಕದಲ್ಲಿ ಇದೇ 7 ಮತ್ತು 8 ರಂದು "ವಿದ್ಯಾರ್ಥಿ ಜಾನಪದ ಲೋಕೋತ್ಸವ–2026" ನಡೆಯಲಿದೆ. 7 ರಂದು ಬೆಳಗ್ಗೆ 10.30 ಕ್ಕೆ ರಾಮನಗರದ ಶ್ರೀ ಆದಿಚುಂಚನಗಿರಿ ಮಠದ ಶಾಖಾ ಮಠಾಧೀಶರಾದ ಅನ್ನದಾನೇಶ್ವರನಾಥ ಸ್ವಾಮೀಜಿ ಸಾನಿಧ್ಯವಹಿಸಲಿದ್ದು, ಖ್ಯಾತ ಚಲನಚಿತ್ರ ನಿರ್ದೇಶಕ ಟಿ.ಎಸ್. ನಾಗಾಭರಣ ಉತ್ಸವ ಉದ್ಘಾಟಿಸಲಿದ್ದಾರೆ. ಎರಡು ದಿನಗಳ ಕಾಲ ಉತ್ಸವದಲ್ಲಿ ಕಲಾ ಪ್ರದರ್ಶನ, ಜನಪದ ಗೀತ ಗಾಯನೋತ್ಸವ, ಬುಡಕಟ್ಟು ಕಲೆಗಳ ಪ್ರದರ್ಶನ, ಹಿರಿಯ ಜನಪದ ಕಲಾವಿದರು ಮತ್ತು ವಿದ್ವಾಂಸರಿಗೆ ಪ್ರಶಸ್ತಿ ಪ್ರದಾನ ಸೇರಿದಂತೆ ಹಲವು ವೈವಿಧ್ಯಮಯ ಕಾರ್ಯಕ್ರಮಗಳು ನಡೆಯಲಿವೆ.

***********

**ವಿಶ್ವ ಕ್ಯಾನ್ಸರ ದಿನದ ಅಂಗವಾಗಿ,** ರಾಜ್ಯದ ವಿವಿಧೆಡೆ ನಿನ್ನೆ ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಜನಜಾಗೃತಿ ಮೂಡಿಸುವ ಪ್ರಯತ್ನ ಮಾಡಲಾಯಿತು. ವಿಶೇಷ ಉಪನ್ಯಾಸ, ಜಾಗೃತಿ ಜಾಥಾ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ವಿವಿಧ ಕ್ಯಾನ್ಸರ ರೋಗಗಳು, ತಂಬಾಕು ಸೇವನೆ ನಿಯಂತ್ರಣ ಸೇರಿದಂತೆ ಅರ್ಬುದ ರೋಗ ತಡೆಗಟ್ಟುವಲ್ಲಿ ಕೈಗೊಳ್ಳಬೇಕಾದ ಅಗತ್ಯ ಮುಂಜಾಗ್ರತಾ ಕ್ರಮಗಳ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಧಾರವಾಡ ಎಸ್.ಡಿ.ಎಂ ಆಸ್ಪತ್ರೆ, ಕ್ಯಾನ್ಸರ ಶಸ್ತ್ರ ಚಿಕಿತ್ಸೆ ತಜ್ಞ ವೈದ್ಯರಾದ ಡಾಕ್ಟರ ಪವನ ಕುಮಾರ....

**ಧ್ವನಿ–ಡಾ.ಪವನಕುಮಾರ– 55 ಸೆಕೆಂಡ್ಸ್**

***********

**ವಿಶ್ವ ಕ್ಯಾನ್ಸರ್ ದಿನದ ಅಂಗವಾಗಿ** ದಾವಣಗೆರೆಯಲ್ಲಿ ರೋಟರಿ ಕ್ಲಬ್ ಹಾಗೂ ವಿವಿಧ ಸಂಶೊಧನಾ ಸಂಸ್ಥೆಗಳ ಸಹಯೋಗದಲ್ಲಿ ವಾಕಥಾನ್ ಆಯೋಜಿಸಲಾಗಿತ್ತು. ಜಿಲ್ಲಾ ಆರೋಗ್ಯ ಅಧಿಕಾರಿ ಷಣ್ಮುಖಪ್ಪ ವಾಕಥಾನ್‌ಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾರ್ವಜನಿಕರಲ್ಲಿ ಕ್ಯಾನ್ಸರ್ ತಡೆಗಟ್ಟುವ ಜೀವನಶೈಲಿ ಮತ್ತು ತಪಾಸಣೆಯ ಬಗ್ಗೆ ಅರಿವು ಮೂಡಿಸುವುದು ಹಾಗೂ ರೋಗಿಗಳಲ್ಲಿ ಆತ್ಮಸ್ಥೈರ್ಯ ತುಂಬುವುದು ಈ ಜಾಥಾದ ಮುಖ್ಯ ಉದ್ದೇಶ ಎಂದರು.

*******

**ಬಾಲಕಾರ್ಮಿಕ ಪದ್ಧತಿ ಹಾಗೂ** ಬಾಲ್ಯವಿವಾಹ ಮುಕ್ತ ಭಾರತ ನಿರ್ಮಾಣ ಮಾಡಲು ಸಮುದಾಯದ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯೂ ಆಗಿರುವ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಹೇಳಿದ್ದಾರೆ. ಜಿಲ್ಲಾ ಕಾನೂನು ಸೇವೆಗಳ ಪಾಧಿಕಾರ ವತಿಯಿಂದ, ಯಾದಗಿರಿ ತಾಲ್ಲೂಕಿನ ಖಾನಹಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದ ಬಾಲ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ತಿದ್ದುಪಡಿ ಕಾಯ್ದೆ ಕುರಿತು ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಪದ್ಧತಿ ಮಕ್ಕಳ ಭವಿಷ್ಯದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಬಾಲಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆ ಜಾರಿಗೆ ತರಲಾಗಿದೆ. ಮಕ್ಕಳನ್ನು ದುಡಿಮೆಯಲ್ಲಿ ತೊಡಗಿಸುವಂತಿಲ್ಲ ಎಂದು ಅವರು ಹೇಳಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ಮನ್ರೇಗಾ ಮರು** ಸ್ಥಾಪನೆಗೆ ಆಗ್ರಹಿಸಿ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಅವರು ಮಂಡಿಸಿದ ನಿರ್ಣಯಕ್ಕೆ ಬಹುತೇಕ ಕಾಂಗ್ರೆಸ್ ಶಾಸಕರ ಬೆಂಬಲ.

**ಕನ್ನಡ ಮಾಧ್ಯಮ ಅಭ್ಯರ್ಥಿಗಳ** ಮೀಸಲು ಶೇಕಡಾ 10ಕ್ಕೆ ಏರಿಸಲು ಶಿಫಾರಸು : ಡಾ. ಪುರುಷೋತ್ತಮ ಬಿಳಿಮಲೆ ಮಾಹಿತಿ.

**ಕರ್ನಾಟಕ ಗಡಿ ಅಭಿವೃದ್ಧಿ** ಪ್ರಾಧಿಕಾರದ 'ಗಡಿನಾಡು ಚೇತನ' ಪ್ರಶಸ್ತಿಗೆ ವಿಜಯಪುರ ಜಿಲ್ಲೆಯ ತಾಂಬಾ ಗ್ರಾಮದ ಅನುವಾದಕ ನಾಗೇಶ್ ಕುಲಕರ್ಣಿ ಭಾಜನ.

**ಬೆಂಗಳೂರು ದಕ್ಷಿಣ ಜಿಲ್ಲೆಯ** ರಾಮನಗರದ ಜಾನಪದ ಲೋಕದಲ್ಲಿ ಇದೇ 7 ಮತ್ತು 8 ರಂದು 'ವಿದ್ಯಾರ್ಥಿ ಜಾನಪದ ಲೋಕೋತ್ಸವ–2026'

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**